ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಡಯಾಲಿಸಿಸ್ ಕೇಂದ್ರಗಳ ಸ್ಥಾಪನೆ ಬಗ್ಗೆ

ಶ್ರೀ ಎಸ್. ಎಲ್. ಭೋಜೇಗೌಡ(ಶಿಕ್ಷಕರ ಕ್ಷೇತ್ರ) -

127 (214) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ತಾಲ್ಲೂಕು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಕೇಂದ್ರಗಳನ್ನು ಸ್ಥಾಪಿಸಿರುವುದರ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಪ್ರಸ್ತುತ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಡಯಾಲಿಸಿಸ್ ಕೇಂದ್ರಗಳ ಸಂಖ್ಯೆ ಎಷ್ಟು; (ತಾಲೂಕುವಾರು ವಿವರ ನೀಡುವುದು)

(ಇ) ಡಯಾಲಿಸಿಸ್ ಕೇಂದ್ರವನ್ನು ಸರ್ಕಾರ ನೇರವಾಗಿ ಸ್ಥಾಪಿಸಿದೆಯೇ ಅಥವಾ ಖಾಸಗಿ ಸಹಭಾಗಿತ್ವಕ್ಕೆ ನೀಡಲು ಉದ್ದೇಶಿಸಿದೆಯೇ;

(ಈ) ಈಗಾಗಲೇ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳಿಗೆ ಹೆಚ್ಚಿನ ಯಂತ್ರೋಪಕರಣಗಳನ್ನು ನೀಡಲು ಸರ್ಕಾರ ಉದ್ದೇಶಿಸಿದೆಯೇ? (ವಿವರ ನೀಡುವುದು)